## ರಾಜ್ಯದ ಎರಡು ಕ್ಷೇತ್ರಗಳಿಗೆ ಚುನಾವಣೆ ಪ್ರಕಟ

# ನ.3ಕ್ಕೆ ಆರ್‌ಆರ್ ನಗರ, ಶಿರಾ ಉಪ ಚುನಾವಣೆ

### ಜೆಡಿಎಸ್‌ನ ಸತ್ಯನಾರಾಯಣ ನಿಧನದಿಂದ ಶಿರಾಕ್ಕೆ ಚುನಾವಣೆ ಮುನಿರತ್ನ ಬಿಜೆಪಿ ಸೇರ್ಪಡೆಯಿಂದ ಆರ್‌ಆರ್ ನಗರ ಚುನಾವಣೆ ಅಭ್ಯರ್ಥಿಗಳ ಆಯ್ಕೆ ಕಸರತ್ತು ಶುರು | ಮಸ್ಕಿ ಚುನಾವಣೆ ಬಾಕಿ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ರಾಜ್ಯದಲ್ಲಿ ಉಪ ಚುನಾವಣೆಗೆ ಅಖಾಡ ಸಜ್ಜಾಗಿದೆ. ಕೇಂದ್ರ ಚುನಾವಣಾ ಆಯೋಗವು ಮಂಗಳವಾರ ತುಮಕೂರು ಜಿಲ್ಲೆಯ ಶಿರಾ ವಿಧಾನಸಭಾ ಕ್ಷೇತ್ರ ಹಾಗೂ ಬೆಂಗಳೂರಿನ ರಾಜರಾಜೇಶ್ವರಿ ನಗರ ವಿಧಾನ ಸಭಾ ಕ್ಷೇತಗಳಿಗೆ ಉಪ ಚುನಾವಣೆ ದಿನಾಂಕ ಘೋಷಿಸಿದೆ. ಈ 2 ಕ್ಷೇತ್ರಗಳಿಗೆ ನ.3ರಂದು ಮತದಾನ ನಡೆಯಲಿದೆ.

ರಾಜ್ಯ ಆಡಳಿತಾರೂಢ ಬಿಜೆಪಿ ಹಾಗೂ ಪ್ರತಿಪಕ್ಷ ಕಾಂಗ್ರೆಸ್ ತೀವ್ರ ಜಿದ್ದಾಜಿದ್ದಿ ಹೋರಾಟದ ನಿರೀಕ್ಷೆಯನ್ನು ಈಗಾಗಲೇ ಮೂಡಿಸಿರುವ ಈ ಎರಡು ಕ್ಷೇತ್ರಗಳಿಗೆ ಅ.9ರಂದು ಅಧಿಸೂಚನೆ ಹೊರಬೀಳಲಿದೆ. ಅ.16ರಂದು ನಾಮಪತ್ರ ಸಲ್ಲಿಕೆಗೆ ಕಡೆಯ ದಿನವಾಗಿದೆ. ಅ.17ರಂದು ನಾಮಪತ್ರಗಳ ಪರಿಶೀಲನೆ ನಡೆಯಲಿದೆ. ಅ.19ರಂದು ಉಮೇದುವಾರಿಕೆ ಹಿಂಪಡೆಯಲು ಕೊನೆಯ ದಿನವಾಗಿದೆ.

ನ.3ರಂದು ಮತದಾನ ನಡೆಯಲಿದ್ದು, ನ.10ರಂದು ಮತ ಎಣಿಕೆ ನಡೆಯಲಿದೆ. ನ.12ರಂದು ಚುನಾವಣಾ ಪ್ರಕ್ರಿಯೆ ಪೂರ್ಣಗೊಳ್ಳಲಿದೆ ಎಂದು ಚುನಾವಣಾ ಆಯೋಗವು ತಿಳಿಸಿದೆ.

↘ 13

- ಅ.9 ಅಧಿಸೂಚನೆ ಪ್ರಕಟ
- ಅ.16 ನಾಮಪತ್ರಕ್ಕೆ ಕೊನೆ ದಿನ
- ಅ.17 ನಾಮಪತ್ರ ಪರಿಶೀಲನೆ
- ಅ.19 ನಾಮಪತ್ರ ವಾಪಸ್ ಪಡೆಯಲು ಕೊನೆಯ ದಿನ
- ನ.3 ಮತದಾನ
- ನ.10 ಮತಗಳ ಎಣಿಕೆ

## ಅ.28ಕ್ಕೆ 4 ಪರಿಷತ್ ಸ್ಥಾನಕ್ಕೆ ಚುನಾವಣೆ

**ಬೆಂಗಳೂರು:** ರಾಜ್ಯದಲ್ಲಿ ಖಾಲಿ ಇರುವ ಎರಡು ಪದವೀಧರ ಕ್ಷೇತ್ರ ಹಾಗೂ ಎರಡು ಶಿಕ್ಷಕರ ಕ್ಷೇತ್ರಗಳಿಂದ ವಿಧಾನ ಪರಿಷತ್‌ಗೆ ಅ.28ರಂದು ಚುನಾವಣೆ ನಡೆಯಲಿದೆ. ಆರ್.ಚೌಡರೆಡ್ಡಿ ತೂಪಲ್ಲಿ, ಎಸ್.ವಿ. ಸಂಕನೂರ, ಶರಣಪ್ಪ ಮಟ್ಟೂರು ಹಾಗೂ ಪುಟ್ಟಣ್ಣ ಅವರಿಂದ ತೆರವಾದ ಈ ಕ್ಷೇತ್ರಗಳಿಗೆ ಈಗ ಚುನಾವಣೆ ನಡೆಯುತ್ತಿದೆ.

ವಿವರ ↘ 9

## ಆರ್‌ಆರ್ ನಗರದಲ್ಲಿ ಮುನಿರತ್ನ ವಿರುದ್ಧ ಡಿ.ಕೆ.ರವಿ ಪತ್ನಿ ಸ್ಪರ್ಧೆ?



ಬೆಂಗಳೂರು: ಆರ್‌ಆರ್ ನಗರ ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿಯಾಗಿ ಮುನಿರತ್ನ ಅವರು ಸ್ಪರ್ಧಿಸುವುದು ಖಚಿತವಾಗಿದೆ. ಆತ್ಮಹತ್ಯೆ ಮಾಡಿಕೊಂಡ ಐಎಎಸ್ ಅಧಿಕಾರಿ ಡಿ.ಕೆ. ರವಿ ಅವರ ಪತ್ನಿ ಕುಸುಮ್ಮಾ ಅವರು ಕಾಂಗ್ರೆಸ್‌ನಿಂದ ಸ್ಪರ್ಧಿಸುವ ಸಾಧ್ಯತೆ ಇದೆ.

ವಿವರ ↘ 9

## ಶಿರಾ: ಜಯಚಂದ್ರಗೆ ಕಾಂಗ್ರೆಸ್ ಟಿಕೆಟ್

ಬೆಂಗಳೂರು: ಶಿರಾ ಕ್ಷೇತ್ರದಿಂದ ಕಾಂಗ್ರೆಸ್ ಅಭ್ಯರ್ಥಿಯಾಗಿ ಟಿ.ಬಿ.ಜಯಚಂದ್ರ ಅವರು ಸ್ಪರ್ಧಿಸಲಿದ್ದಾರೆ ಎಂದು ಕಾಂಗ್ರೆಸ್ ತಿಳಿಸಿದೆ. ಬಿಜೆಪಿ ಮತ್ತು ಜೆಡಿಎಸ್ ಅಭ್ಯರ್ಥಿಗಳ ಆಯ್ಕೆ ಇನ್ನಷ್ಟೇ ಆಗಬೇಕಿದೆ.

ವಿವರ ↘ 9

# ನ.3ಕ್ಕೆ ಆರ್‌ಆರ್ ನಗರ, ಶಿರಾ ಉಪ ಚುನಾವಣೆ

ಮೊದಲ ಪುಟದಿಂದ

**ಉಪ ಕದನ**

ಆರ್.ಆರ್.ನಗರ ಕ್ಷೇತ್ರದಿಂದ ಕಾಂಗ್ರೆಸ್ ಶಾಸಕರಾಗಿ ಆಯ್ಕೆಯಾಗಿದ್ದ ಮುನಿರತ್ನ ಅವರು ರಾಜೀನಾಮೆ ನೀಡಿ ಬಿಜೆಪಿಗೆ ಸೇರ್ಪಡೆಯಾಗಿರುವುದರಿಂದ ಮತ್ತು ಶಿರಾ ಕ್ಷೇತ್ರದಿಂದ ಆಯ್ಕೆಯಾಗಿದ್ದ ಜೆಡಿಎಸ್‌ನ ಬಿ.ಸತ್ಯನಾರಾಯಣ ಅವರ ಅಕಾಲಿಕ ನಿಧನದಿಂದಾಗಿ ಎರಡು ವಿಧಾನಸಭಾ ಕ್ಷೇತ್ರಗಳಿಗೆ ಚುನಾವಣೆ ಘೋಷಣೆ ಮಾಡಲಾಗಿದೆ. ಕೋವಿಡ್-19 ಹಿನ್ನೆಲೆಯಲ್ಲಿ ಅಗತ್ಯ ಸುರಕ್ಷತಾ ಕ್ರಮಗಳನ್ನು ಅನುಸರಿಸಿ ಉಪಚುನಾವಣೆ ನಡೆಸಬೇಕು. ಮತದಾರ ಪಟ್ಟಿ ಸಿದ್ಧಪಡಿಸಿಕೊಳ್ಳಬೇಕು, ಮತ್ತು ಅಗತ್ಯ ಇರುವಷ್ಟು ಮತಯಂತ್ರಗಳನ್ನು ಸಿದ್ಧವಾಗಿಟ್ಟುಕೊಳ್ಳಬೇಕು ಎಂದು ಸೂಚನೆ ನೀಡಿದೆ.

**ಆರ್‌ಆರ್ ನಗರ ಅನಿರೀಕ್ಷಿತ:** ಉಪ ಚುನಾವಣೆ ಘೋಷಣೆಯಾಗುತ್ತಿದ್ದಂತೆ ಆಡಳಿತಾರೂಢ ಬಿಜೆಪಿ, ಪ್ರತಿಪಕ್ಷ ಕಾಂಗ್ರೆಸ್ ಮತ್ತು ಜೆಡಿಎಸ್‌ನಲ್ಲಿ ರಾಜಕೀಯ ಚಟುವಟಿಕೆಗಳು ಆರಂಭಗೊಂಡಿವೆ. ರಾಜ್ಯದ 224 ವಿಧಾನಸಭಾ ಕ್ಷೇತ್ರಗಳ ಪೈಕಿ ಸದ್ಯ ನಾಲ್ಕು ಕ್ಷೇತ್ರಗಳಿಗೆ ಉಪ ಚುನಾವಣೆ ನಡೆಯಬೇಕಿತ್ತು. ಇದೀಗ ಶಿರಾ ಮತ್ತು ಆರ್.ಆರ್.ನಗರ ಕ್ಷೇತ್ರಗಳಿಗೆ ಉಪಚುನಾವಣೆ ಘೋಷಣೆಯಾಗಿದೆ. ರಾಯಚೂರು ಜಿಲ್ಲೆಯ ಮಸ್ಕಿ ಮತ್ತು ಇತ್ತೀಚೆಗೆ ಶಾಸಕ ನಾರಾಯಣ ರಾವ್ ನಿಧನ ಹಿನ್ನೆಲೆಯಲ್ಲಿ ಬೀದರ್ ಜಿಲ್ಲೆಯ ಬಸವಕಲ್ಯಾಣ ಕ್ಷೇತ್ರಕ್ಕೆ ಉಪಚುನಾವಣೆ ಇನ್ನಷ್ಟೇ ಘೋಷಣೆಯಾಗಬೇಕಿದೆ. ಮಸ್ಕಿ ಹಾಗೂ ಶಿರಾ ಕ್ಷೇತ್ರಗಳಿಗ ಉಪ ಚುನಾವಣೆ ಘೋಷಣೆಯಾಗಲಿದೆ ಎಂದು ರಾಜಕೀಯ ಪಕ್ಷಗಳು ನಿರೀಕ್ಷಿಸಿದ್ದವು. ಆದರೆ, ಅಚ್ಚರಿಯೆಂಬಂತೆ ರಾಜರಾಜೇಶ್ವರಿ ನಗರದ ಕ್ಷೇತ್ರದ ಉಪ ಚುನಾವಣೆ ಘೋಷಣೆಯಾಗಿದೆ.